9. ಮಾನ್ಯ ಮುಖ್ಯಮಂತ್ರಿಗಳಿಂದ ಹೇಳಿಕೆ

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು): ಪಾರ್ಲಿಮೆಂಟ್ ಮೇಲೆ ದಾಳಿಯಾದ ಕುರಿತು.

ಡಿಸೆಂಬರ್, 13 – ರಾಷ್ಟ್ರೀಯ ಭದ್ರತಾ ದಿನ

2001ರ ಇದೇ ದಿನ ಅಂದರೆ ಡಿಸೆಂಬರ್ 13ರಂದು ಭಾರತದ ಸಂಸತ್ ಭವನದ ಮೇಲೆ ರಾಷ್ಟ್ರ ವಿರೋಧಿ ಶಕ್ತಿಗಳು ಆಕ್ರಮಣ ಮಾಡಿದ್ದನ್ನು ಯಾರೂ ಮರೆಯಲು ಸಾಧ್ಯವಿಲ್ಲ. ಅಂದು ಸಂಸತ್ ಭವನದ ಬಳಿ ಇದ್ದ ನಮ್ಮ ನಿರ್ಭೀತ ಭದ್ರತಾ ಪಡೆಗಳು ತಮ್ಮ ಜೀವದ ಹಂಗನ್ನು ತೊರೆದು ಹೋರಾಡದಿದ್ದಲ್ಲಿ ದೇಶದ ಇತಿಹಾಸದಲ್ಲೇ ಒಂದು ದೊಡ್ಡ ದುರಂತ ಸಂಭವಿಸಬಹುದಿತ್ತು. ಅಂದಿನ ಭಯೋತ್ಪಾದಕ ಘಟನೆಯನ್ನು ಸೂಕ್ಷ್ಮವಾಗಿ ಅವಲೋಕಿಸಿದಲ್ಲಿ ಈ ರೀತಿಯ ದುರ್ಘಟನೆಗಳು ಯಾವಾಗಲಾದರೂ ಸಂಭವಿಸಬಹುದು ಎಂಬುದು ಸ್ಪಷ್ಟವಾಗುತ್ತದೆ. ಆದ್ದರಿಂದ ಶಾಂತಿಗೆ ಭಂಗ ತರುವಂತಹ ಹಾಗೂ ಅಭಿವೃದ್ಧಿಗೆ ಅಡ್ಡಿಪಡಿಸುವಂತಹ ಭಯೋತ್ಪಾದಕರ ಕುತಂತ್ರಗಳಿಗೆ ನಮ್ಮ ರಾಷ್ಟ್ರ ಸುಲಭವಾದ ಗುರಿಯಾಗುವುದನ್ನು ತಪ್ಪಿಸಲು ನಮ್ಮ ಎಲ್ಲಾ ತಪ್ಪುಒಪ್ಪುಗಳ ಬಗ್ಗೆ ಮರುಪರಿಶೀಲನೆ ಮಾಡಿ ನಾವು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಯೋಚಿಸಬೇಕಾಗಿದೆ.

ದೇಶದ ಭದ್ರತೆಯನ್ನು ಕಾಪಾಡುವ ನಿಟ್ಟಿನಲ್ಲಿ ಒಂದು ಸಮಗ್ರ ರಾಷ್ಟ್ರೀಯ ಭದ್ರತಾ ನೀತಿ ರಚಿಸುವುದರೊಂದಿಗೆ ಅದನ್ನು ಅನುಷ್ಠಾನಗೊಳಿಸಲು ಸಮರ್ಥ ಆಡಳಿತ ವ್ಯವಸ್ಥೆಯನ್ನು ರೂಪಿಸುವ ತುರ್ತು ಅಗತ್ಯವಿದೆ. ಜೊತೆಗೆ, ಭಯೋತ್ಪಾದನೆಯೂ ಒಳಗೊಂಡಂತೆ ಎಲ್ಲಾ ರೀತಿಯ ಪ್ರಜಾಪ್ರಭುತ್ವ ವಿರೋಧಿ ಹಾಗೂ ವಿಚ್ಛಿದ್ರಕಾರಕ ಶಕ್ತಿಗಳ ವಿರುದ್ಧ ಗಟ್ಟಿಯಾಗಿ ನಿಲ್ಲುವ ಅವಶ್ಯಕತೆ ನಮ್ಮೆಲ್ಲರ ಹೊಣೆಯಾಗಿದೆ. ಅಲ್ಲದೆ, ನಮ್ಮ ಮೂಲಭೂತ ಮೌಲ್ಯಗಳು ಹಾಗೂ ಹಿತಾಸಕ್ತಿಗಳನ್ನು ಕಾಯ್ದುಕೊಂಡು ದೇಶದ ಒಟ್ಟಾರ ಭದ್ರತೆಯ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರೂ ಪಾಲುದಾರರು ಎಂಬ ಅರಿವು ಮೂಡಿಸುವುದು ಈಗ ಅಷ್ಟೇ ಮುಖ್ಯವಾಗಿದೆ.

ಕರ್ನಾಟಕ ರಾಜ್ಯದ ಕರಾವಳಿ ಪ್ರದೇಶವು ಭಯೋತ್ಪಾದಕ ಕೃತ್ಯಗಳಿಗೆ ಗುರಿಯಾಗುವ ಅಪಾಯ ಹೆಚ್ಚಾಗುತ್ತಿದೆ. ಜೊತೆಗೆ ನಕ್ಸಲರು ಹಾಗೂ ಇತರೆ ರಾಷ್ಟ್ರ ವಿರೋಧಿ ಶಕ್ತಿಗಳು ತಮ್ಮ ಹಿಡಿತವನ್ನು ಈ ಪ್ರದೇಶದಲ್ಲಿ ಗಟ್ಟಿ ಮಾಡಿಕೊಳ್ಳುವ ಸನ್ನಾಹದಲ್ಲಿವೆ. ಈ ಎಲ್ಲಾ ದುಷ್ಟ ಶಕ್ತಿಗಳನ್ನು ಹತ್ತಿಕ್ಕಲು ಕರ್ನಾಟಕ ಸರ್ಕಾರವು ಪೂರ್ಣವಾಗಿ ಬದ್ಧವಾಗಿದೆ. ಈ

ನಿಟ್ಟಿನಲ್ಲಿ ರಾಜ್ಯದ ಜನತೆಯ ಐಕ್ಯಮತ್ಯ ಮತ್ತು ರಚನಾತ್ಮಕ ಒಡನಾಟ ಸರ್ಕಾರಕ್ಕೆ ಹೆಚ್ಚಿನ ಬಲ ನೀಡಲಿದೆ. ಈ ಅಂಶಗಳ ಹಿನ್ನೆಲೆಯಲ್ಲಿ ಪ್ರತಿ ವರ್ಷ ಡಿಸೆಂಬರ್ 13ನ್ನು **ರಾಷ್ಟ್ರೀಯ ಭದ್ರತಾ ದಿನ** ಎಂದು ಆಚರಿಸಲು ಕರ್ನಾಟಕ ಸರ್ಕಾರವು ತೀರ್ಮಾನಿಸಿದೆ.

ಅಧ್ಯಕ್ಷರು: ಈಗ ಒಂದು 2001 ರ ಬಿಲ್ ಅನ್ನು ಶ್ರೀ ಸುರೇಶ್ ಕುಮಾರ್ ರವರು ವಾಪಸ್ಸು ತೆಗೆದುಕೊಳ್ಳುತ್ತಾರೆ.

10. ಶಾಸನ ರಚನೆ

(ಅ) ವಿಧೇಯಕವನ್ನು ಹಿಂದಕ್ಕೆ ಪಡೆಯುವುದು

ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2001

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ನಗರಾಭಿವೃದ್ಧಿ ಸಚಿವರು): ಹಿಂದೆ 2001 ಎಂದು ಇತ್ತು. ಅದು President ನಿಂದ ವಾಪಸ್ಸು ಬಂದಿದೆ. ಅದರ ಬದಲು ಬೇರೆ ಮಾಡುತ್ತೇವೆ. ಮಾನ್ಯ ಸಭಾಧ್ಯಕ್ಷರೆ, "ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ 2001" ಅನ್ನು ಹಿಂದಕ್ಕೆ ಪಡೆಯುತ್ತೇನೆ.

ಅಧ್ಯಕ್ಷರು: ಮಾನ್ಯ ಸಚಿವರು ಮಂಡಿಸಿರುವ ಈ ಕೆಳಕಂಡ ಪ್ರಸ್ತಾವನೆಗೆ ಸದನದ ಸಹಮತಿ ಇದೆಯೆಂದು ಭಾವಿಸುತ್ತೇನೆ. ಪ್ರಸ್ತಾವ ಏನೆಂದರೆ, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ 2001 ಅನ್ನು ಹಿಂದಕ್ಕೆ ಪಡೆಯುವುದು

(ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ವಿಧೇಯಕವನ್ನು ಹಿಂದಕ್ಕೆ ಪಡೆಯಲು ಅನುಮತಿ ನೀಡಲಾಯಿತು)

ಅಧ್ಯಕ್ಷರು: ಇನ್ನೊಂದು ಶಾಸನ ರಚನೆಯ ಒಂದು ಬಿಲ್ introduce ಮಾಡಿ.